ಗ್ರಾಮಾಂತರ ಪ್ರದೇಶಗಳಲ್ಲಿ ಪ್ರಕೃತಿ ಚಿಕಿತ್ಸಾಲಯಗಳಿಗೆ ಬೇಡಿಕೆ ಇರುವುದಿಲ್ಲ. ಆದ್ದರಿಂದ ಪ್ರಾತಿನಿಧ್ಯ ಕಡಿಮೆ ಇದೆ.

ಉಚಿತ ಪಠ್ಯ ಪುಸ್ತಕಗಳ ವಿತರಣೆ

1676 - ಶ್ರೀ ರಾಮಲಿಂಗಾ ರೆಡ್ಡಿ (ಜಯನಗರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಹಾಗೂ ಮಾಧ್ಯಮಿಕ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು?

ಆ) ಇವರ ಪೈಕಿ ಬೆಂಗಳೂರಿನ ಸರ್ಕಾರಿ ಪ್ರಾಥಮಿಕ ಹಾಗೂ ಮಾಧ್ಯಮಿಕ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವವರ ಸಂಖ್ಯೆ ಎಷ್ಟು?

ಇ) ಈ ಎಲ್ಲಾ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕಗಳನ್ನು ಪುಕ್ಕಟೆಯಾಗಿ ಹಂಚಲಾಗಿದೆಯೇ

ಈ) ಹಾಗಿದ್ದಲ್ಲಿ ಇಲ್ಲಿಯವರೆಗೆ ಎಷ್ಟು ವಿದ್ಯಾರ್ಥಿಗಳಿಗೆ ಈ ರೀತಿ ಪುಕ್ಕಟೆಯಾಗಿ ಪಠ್ಯಪುಸ್ತಕಗಳನ್ನು ಹಂಚಲಾಗಿದೆ?

ಉ) ಉಳಿದ ವಿದ್ಯಾರ್ಥಿಗಳಿಗೆ ಯಾವಾಗ ಹಂಚಲಾಗುವುದು?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) 68,58,597 ವಿದ್ಯಾರ್ಥಿಗಳು

ಆ) 2,32,449 ವಿದ್ಯಾರ್ಥಿಗಳು

ಇ) ಇಲ್ಲ. ಅಕ್ಷಯ ಹಾಗೂ ವಿದ್ಯಾವಿಕಾಸ ಯೋಜನೆಯಡಿಯಲ್ಲಿ ಬರುವ ವಿದ್ಯಾರ್ಥಿಗಳಿಗೆ ಮಾತ್ರ ಹಂಚಲಾಗಿದೆ.

ಈ) 1,58,944 ವಿದ್ಯಾರ್ಥಿಗಳಿಗೆ ಎರಡೂ ಯೋಜನೆಗಳಿಂದ ಉಚಿತವಾಗಿ ಪಠ್ಯಪುಸ್ತಕಗಳನ್ನು ಹಂಚಲಾಗಿದೆ.

ಉ) ಪ್ರಶ್ನೆ ಉದ್ಭವಿಸುವುದಿಲ್ಲ.

ಶೋರಪುರ ತಾಲ್ಲೂಕಿನಲ್ಲಿ ಮಾಧ್ಯಮ ಶಾಲೆಗಳ ಶಿಕ್ಷಕರ ಹುದ್ದೆ ಭರ್ತಿ

2435 - ಶ್ರೀ ರಾಜವೆಂಕಟಪ್ಪನಾಯಕ್ (ಶೋರಾಪುರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶೋರಾಪುರ ತಾಲ್ಲೂಕಿನಲ್ಲಿ ಎಷ್ಟು ಮಾಧ್ಯಮ ಶಾಲೆಗಳು ಇವೆ?

ಆ) ಈ ಶಾಲೆಗಳಲ್ಲಿ ಶಿಕ್ಷಕರನ್ನು ನೇಮಕ ಮಾಡಲಾಗಿದೆಯೇ?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):

ಅ) ಮಾದರಿ ಹಿರಿಯ ಪ್ರಾಥಮಿಕ ಶಾಲೆ - 12

ಹಿರಿಯ ಪ್ರಾಥಮಿಕ ಶಾಲೆ - 78

ಆ) ಈ ಶಾಲೆಗಳಿಗೆ ಶಿಕ್ಷಕರನ್ನು ನೇಮಕ ಮಾಡಲಾಗಿದ್ದು ಖಾಲಿ ಇರುವ ಶಿಕ್ಷಕರ ಹುದ್ದೆಯನ್ನು ತುಂಬಲು 1996-97ರಲ್ಲಿ ನೇಮಕಾತಿ ಪ್ರಕ್ರಿಯೆ ಪ್ರಾರಂಭವಾಗಿರುತ್ತದೆ.